# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 870 (1163) |
| ಉತ್ತರಿಸುವ ದಿನಾಂಕ | 28-12-2022 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಎಸ್.ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಎಷ್ಟು ಉಪನೋಂದಣಾಧಿಕಾರಿ ಕಛೇರಿಗಳು ಕಾರ್ಯ ನಿರ್ವಹಿಸುತ್ತಿವೆ ಹಾಗೂ ಈ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಒಟ್ಟು 254 ಉಪನೋಂದಣಾಧಿಕಾರಿ ಕಛೇರಿಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಒಟ್ಟು 994 ಅಧಿಕಾರಿಗಳು/ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. |
| ಆ | ಉಪನೋಂದಣಾಧಿಕಾರಿ ಕಛೇರಿಯಲ್ಲಿ ನೋಂದಣಿಗೆ ಹೊಸ ಸಾಫ್ಟ್‌ವೇರ್‌ನ್ನು ಬಳಕೆ ಮಾಡಲಾಗುತ್ತಿದೆಯೇ; ಮಾಡುತ್ತಿದ್ದಲ್ಲಿ, ಅದನ್ನು ಎಷ್ಟು ಸಮಯದಿಂದ ಬಳಸಲಾಗುತ್ತಿದೆ? (ವಿವರ ನೀಡುವುದು) | ಉಪ ನೋಂದಣಿ ಕಛೇರಿಗಳಲ್ಲಿ ಹಾಲಿ ದಸ್ತಾವೇಜುಗಳ ನೋಂದಣಿಗೆ ಮೆ:ಸೆಂಟರ್ ಫಾರ್ ಅಡ್ವಾನ್ಸ್‌ಡ್ ಕಂಪ್ಯೂಟಿಂಗ್, ಪುಣೆ ರವರು 2003 ರಲ್ಲಿ ಅಭಿವೃದ್ಧಿಪಡಿಸಿರುವ "ಕಾವೇರಿ" ತಂತ್ರಾಂಶವನ್ನು ಉಪಯೋಗಿಸಲಾಗುತ್ತಿದೆ. ಸದರಿ ತಂತ್ರಾಂಶವನ್ನು Visual Basic ಹಾಗೂ Windows XP Platform ರಡಿ ಅಭಿವೃದ್ಧಿಪಡಿಸಲಾಗಿದೆ. ಈ ಎರಡು ತಂತ್ರಾಂಶಗಳು Outdated ಆಗಿರುವುದರಿಂದ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ (ಇ-ಆಡಳಿತ) ಅಧೀನದಲ್ಲಿರುವ ಸೆಂಟರ್ ಫಾರ್ ಸ್ಮಾರ್ಟ್ ಗೌವರ್ನೆನ್ಸ್ ಸಂಸ್ಥೆಯ ಸಹಯೋಗದೊಂದಿಗೆ "ಕಾವೇರಿ-2.0" ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗುತ್ತಿದೆ. |

ಸಂಖ್ಯೆ: ಕಂಇ/421/ಎಂಎನ್‌ಎಸ್‌ಎ/2022

(ಆರ್.ಅಶೋಕ)
ಕಂದಾಯ ಸಚಿವರು